ಜಿಲ್ಲಾ ಪರಿಷತ್ ಇಂಜಿನಿಯರಿಂಗ್ ಉಪ ವಿಭಾಗ ಅಂಕೋಲಾ 22-7-91 ರಿಂದ
ಜಿಲ್ಲಾ ಪರಿಷತ್ ಇಂಜಿನಿಯರಿಂಗ್ ಉಪ ವಿಭಾಗ ಕುಮಟಾ 1-7-91 ರಿಂದ

ಈ) ಜಿಲ್ಲಾ ಪರಿಷತ್‌ನಲ್ಲಿನ ಕಾರ್ಯಪಾಲಕ ಅಭಿಯಂತರರು ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರ ಹುದ್ದೆಗಳನ್ನು ನೇಮಕಾತಿ ನಿಯಮಗಳ ಪ್ರಕಾರ ಲೋಕೋಪಯೋಗಿ ಇಲಾಖೆಯಿಂದ ನಿಯೋಜನೆ ಮೇಲೆ ಭರ್ತಿ ಮಾಡಬೇಕಾಗಿರುತ್ತದೆ. ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಉ) ಪ್ರಶ್ನೆ (ಈ)ಗೆ ಕೊಟ್ಟಿರುವ ಉತ್ತರದಿಂದ ಇದು ಉದ್ಭವಿಸುವುದಿಲ್ಲ.

ಬ್ಯಾರೇಜ್ ನಿರ್ಮಾಣ

2043 - ಶ್ರೀ ಬಿ.ಹೆಚ್. ಬನ್ನಿಕೋಡ್ (ಹಿರೇಕೆರೂರು) : ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) ಧಾರವಾಡ ಜಿಲ್ಲೆಯ ಹಿರೇಕೆರೂರು ತಾಲ್ಲೂಕಿನಲ್ಲಿ ಕುಮದ್ವತಿ ನದಿಗೆ (1)ಯಲಿಪಾಳ (2)ರಟ್ಟಿಹಳ್ಳಿ ಮತ್ತು (3)ಕುಡಪಲಿ ಗ್ರಾಮಗಳ ಹತ್ತಿರ ಬ್ಯಾರೇಜ್ ನಿರ್ಮಾಣ ಮಾಡಿ ನೀರಾವರಿ ಸೌಲಭ್ಯ ಒದಗಿಸಿ ಕೊಡಲು ಬಹಳ ವರ್ಷಗಳಿಂದ ಸಾರ್ವಜನಿಕರ ಒತ್ತಾಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) 1991-92ನೇ ಆಯವ್ಯಯದಲ್ಲಿ ಮೇಲ್ಕಂಡ ಯಾವುದಾದರೂ ಬ್ಯಾರೇಜ್ ನಿರ್ಮಾಣಕ್ಕಾಗಿ ಸರ್ಕಾರ ಹಣವನ್ನು ಮೀಸಲಾಗಿಟ್ಟಿದೆಯೇ?

ಇ) ಮೇಲ್ಕಂಡ ಬ್ಯಾರೇಜ್‌ಗಳನ್ನು ನಿರ್ಮಾಣ ಮಾಡುವ ಬಗ್ಗೆ ಸರ್ಕಾರದ ಕ್ರಮ ಹಾಗೂ ನೀತಿಯೇನು?

ಶ್ರೀ ಕೆ.ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು)

ಅ) ಬಂದಿದೆ.

ಆ) ಇಲ್ಲ.

ಇ) ನೀರಿನ ಲಭ್ಯತೆ ಹಾಗೂ ಹಣಕಾಸಿನ ಪರಿಸ್ಥಿತಿಯನ್ನು ಅನುಸರಿಸಿ, ಮೇಲ್ಕಂಡ ಬ್ಯಾರೇಜುಗಳನ್ನು ಆಯವ್ಯಯದಲ್ಲಿ ಸೇರಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಕಾವೇರಿ ಜಲಾನಯನ ಪ್ರದೇಶಗಳಿಗಾಗಿ ಖರ್ಚು ಮಾಡಿದ ಹಣ

2042 - ಶ್ರೀ ಬಿ.ಎಸ್. ಯಡಿಯೂರಪ್ಪ (ಶಿಕಾರಿಪುರ) : ಮಾನ್ಯ ಭಾರಿ ಹಾಗೂ ಮಧ್ಯಮ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) ಕಳೆದ 8 ವರ್ಷಗಳಿಂದ ಕಾವೇರಿ ಜಲಾನಯನ ಪ್ರದೇಶದಲ್ಲಿ ನೀರಾವರಿ ಅಭಿವೃದ್ಧಿಗಾಗಿ ಬಜೆಟ್‌ನಲ್ಲಿ ತೆಗೆದಿಟ್ಟ ಮೊತ್ತವೆಷ್ಟು ಹಾಗೂ ಪ್ರತಿ ವರ್ಷ ಅದಕ್ಕಾಗಿ ಖರ್ಚು ಮಾಡಿದ ಹಣವೆಷ್ಟು?

ಆ) ಎಷ್ಟು ಎಕರೆ ಪ್ರದೇಶ ನೀರಾವರಿಗೆ ಒಳಪಟ್ಟಿದೆ?

ಇ) ಇನ್ನು ಎಷ್ಟು ಎಕರೆ ಪ್ರದೇಶ ನೀರಾವರಿಗೆ ಅಳವಡಿಸಲು ಸರ್ಕಾರ ಯೋಜಿಸಿದೆ?

ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು):